## ಕರ್ನಾಟಕ ಸರ್ಕಾರ

ನಂ. : ಎಎಲ್‌ಎನ್ [ಇ.ವಿ.ಹೆಚ್.] ಎಸ್‌ಆರ್ 449/2007-08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ ,
ಬೆಂಗಳೂರು, ದಿನಾಂಕ : 23.10.2008.

### ಅ ಧಿ ಕೃ ತ ಜ್ಞಾ ಪ ನ

ವಿಷಯ : ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ತೂಬರಹಳ್ಳಿ ಗ್ರಾಮದ ಸರ್ವೆ ನಂ : 58/1 ರಲ್ಲಿ 0-27 ಗುಂಟೆ ಮತ್ತು ಸರ್ವೆ ನಂ : 63/1ರಲ್ಲಿ 1-31 ಎಕರೆ / ಗುಂಟೆ ಒಟ್ಟು 2-18 ಎಕರೆ / ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ, ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀ ಎಂ. ಚಂದ್ರಪ್ಪರೆಡ್ಡಿ ಬಿನ್ ಲೇಟ್ ಮುನಿಶಾಮಪ್ಪ ತೂಬರಹಳ್ಳಿ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು.ರವರು ಸಲ್ಲಿಸಿರುವ ಅರ್ಜಿ ದಿನಾಂಕ : 25.10.2007.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 7 ಎಲ್‌ಜಿಪಿ 1995, ದಿನಾಂಕ : 7.6.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 56 ಎಲ್‌ಜಿಪಿ 2008, ದಿನಾಂಕ : 10.9.2008 & 24.9.2008.
3. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರುರವರ ವರದಿ ನಂ : ಎಎಲ್‌ಎನ್ ಎಸ್‌ಆರ್ 270/2007-08, ದಿನಾಂಕ : 2.11.2007.
4. ಭೂ ಪರಿವರ್ತನಾ ಶುಲ್ಕ ರೂ. 1,33,403-00 ಹಾಗೂ ಪೋಡಿ ಶುಲ್ಕ ರೂ. 110-00 ಸೇರಿ ಒಟ್ಟು ರೂ. 1,33,513-00ಗಳನ್ನು ಚಲನ್ ದಿನಾಂಕ : 2.1.2008 ರಂತೆ ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಏಕಗವಾಕ್ಷಿ ಸಮಿತಿ ಸಭೆಯ ನಡವಳಿ ದಿನಾಂಕ : 28.11.2007.

% % % % % %

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95[2], 95[4] ಮತ್ತು 95[7] ರ ಷರತ್ತುಗಳು, ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ [ತಿದ್ದುಪಡಿ] ನಿಯಮಗಳು 1994ರ ನಿಯಮ 107[1] ರಂತೆ ಎಕರೆ ಒಂದಕ್ಕೆ ರೂ 54,450-00 [ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ರೂ. ಗಳು ಮಾತ್ರ] ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿ ಚಲನ್‌ನ್ನು ಹಾಜರು ಪಡಿಸಿರುವ ಮೇರೆಗೆ, ಅರ್ಜಿದಾರರಾದ ಶ್ರೀ ಎಂ. ಚಂದ್ರಪ್ಪರೆಡ್ಡಿ ಬಿನ್ ಲೇಟ್ ಮುನಿಶಾಮಪ್ಪ ತೂಬರಹಳ್ಳಿ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು.ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ತೂಬರಹಳ್ಳಿ ಗ್ರಾಮದ ಸರ್ವೆ ನಂ : 58/1 ರಲ್ಲಿ 0-27 ಗುಂಟೆ ಮತ್ತು ಸರ್ವೆ ನಂ : 63/1ರಲ್ಲಿ 1-31 ಎಕರೆ / ಗುಂಟೆ ಒಟ್ಟು 2-18 ಎಕರೆ / ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ. ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.
4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕೆ ಕಾಯ್ದಿರಿಸತಕ್ಕದ್ದು.
5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೇ ನಿವೇಶನಗಳನ್ನು / ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪ ನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ. ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.
6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತಿಯ ಒದಗಿಸಿ ಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾಕು ಘೂಟು ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರ ಉದ್ದೇಶಕ್ಕಾಗಿ ಬಳಸಲು ಭೂ ಪರಿವರ್ತನೆ ನೀಡಿದೆ. ಬಿ ಖರಾಬು ವಿಸ್ತೀರ್ಣದ ಜಮೀನನ್ನು ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಇಲಾಖೆಯ ಪತ್ರದ ಸಂಖ್ಯೆ : ಪಿ1/7[11]67, ದಿನಾಂಕ : 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 40 ಮೀಟರ್‌ಗ ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 25 ಮೀಟರ್‌ಗಳ ಅಂತರವನ್ನು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ಒಳಗಾಗಿ ಉಪಯೋಗಿಸತಕ್ಕದ್ದು.

10. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ / ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗು ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

<u>ಷೆ ಡ್ಯೂ ಲ್ ವಿ ವ ರ</u>

ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ತೂಬರಹಳ್ಳಿ ಗ್ರಾಮದ ಸರ್ವೆ ನಂ : 58/1 ರಲ್ಲಿ 0–27 ಗುಂಟೆ ಮತ್ತು ಸರ್ವೆ ನಂ : 63/1ರಲ್ಲಿ 1–31 ಎಕರೆ / ಗುಂಟೆ ಒಟ್ಟು 2–18 ಎಕರೆ / ಗುಂಟೆ ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚೆಕ್ಕುಬಂದಿ :

ಗ್ರಾಮ : ತೂಬರಹಳ್ಳಿ

| ಸರ್ವೆ ನಂ | : | 58/1 | 63/1 |
|---|---|---|---|
| ಪೂರ್ವಕ್ಕೆ | : | ಸರ್ವೆ ನಂ : 56ರ ಜಮೀನು | ಸರ್ವೆ ನಂ : 63/2ರ ಜಮೀನು |
| ಪಶ್ಚಿಮಕ್ಕೆ | : | ಸರ್ವೆ ನಂ : 62ರ ಜಮೀನು | ಮುನ್ನೇಕೊಳಾಲು ಗ್ರಾಮದ ಗಡಿ |
| ಉತ್ತರಕ್ಕೆ | : | ಸವೆ ನಂ : 58/1ರ ಜಮೀನು | ಸರ್ವೆ ನಮ : 64ರ ಗಡಿ |
| ದಕ್ಷಿಣಕ್ಕೆ | : | ಸರ್ವೆ ನಂ : 58/1ರ ಜಮೀನು | ಸರ್ವೆ ನಂ ; 62ರ ಗಡಿ |

ಸಹಿ/–

[ಹೆಚ್.ರಾಮಾಂಜನೇಯ]
ವಿಶೇಷ ಜಿಲ್ಲಾಧಿಕಾರಿ [ಕಂದಾಯ],
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ.

1. ತಹಸೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಗಣಕೀಕೃತ ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸಲಾಗುವುದು.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4. ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು.
5. ಉಪ ನೋಂದಣಾಧಿಕಾರಿಗಳು, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅರ್ಜಿದಾರರಾದ ಶ್ರೀ ಎಂ. ಚಂದ್ರಪ್ಪರೆಡ್ಡಿ ಬಿನ್ ಲೇಟ್ ಮುನಿಶಾಮಪ್ಪ ತೂಬರಹಳ್ಳಿ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು. ರವರಿಗೆ ದೃಢೀಕೃತ ಅಂಚೆ ಮೂಲಕ.
7. ಚೆಟ್ಟಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿ [ಕಂದಾಯ],
ಬೆಂಗಳೂರು ಜಿಲ್ಲೆ, ಬೆಂಗಳೂರು.

ಕರ್ನಾಟಕ ಸರ್ಕಾರ

ಸಂಖ್ಯೆ : ಎಎಲ್‌ಎನ್ [ಇ.ವಿ.ಹೆಚ್.] ಎಸ್‌ಆರ್ 449/2007-08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ : 12.10.2009

ಪ ರಿ ಷ್ಕೃ ತ ತಿ ಳು ವ ಳಿ ಕೆ ಪ ತ್ರ

ವಿಷಯ : ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ತೂಬರಹಳ್ಳಿ ಗ್ರಾಮದ ಸರ್ವೆ ನಂ : 63/1ರಲ್ಲಿ 0-16 ಗುಂಟೆ ವಿಸ್ತೀರ್ಣವನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ : ಸರ್ಕಾರದ ಪತ್ರ ಸಂಖ್ಯೆ : ಆರ್‌ಡಿ 1013 ಎಲ್‌ಜಿಬಿ 2008, ದಿನಾಂಕ : 22.4.2009.

>> 00 <<

ನೀವು ದಿನಾಂಕ : 25.10.2007 ರಂದು ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ತೂಬರಹಳ್ಳಿ ಗ್ರಾಮಧ ಸರ್ವೆ ನಂ : 63/1ರಲ್ಲಿ 0-16 ಗುಂಟೆ ವಿಸ್ತೀರ್ಣವನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಸಲ್ಲಿಸಿರುವ ಅರ್ಜಿಯನ್ನು ಪರಿಶೀಲಿಸಿರುತ್ತದೆ. ಹಾಗೂ ಈ ಬಾಬ್ತು ಈ ಕೆಳಗೆ ನಮುದಿಸಿರುವ ಭೂ ಪರಿವರ್ತನಾ ಶುಲ್ಕವನ್ನು ಮತ್ತು ಪೋಡಿ ಶುಲ್ಕವನ್ನು ಸರ್ಕಾರಕ್ಕೆ ಜಮಾ ಮಾಡಿ. ಈ ತಿಳುವಳಿಕೆ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ರೂ. 100,00 [ರೂಪಾಯಿಗಳು ಒಂದು ನೂರು ಮಾತ್ರ] ಛಾಪ ಕಾಗದದಲ್ಲಿ ಕರಾರು ಪತ್ರದೊಂದಿಗೆ ಚಲನ್ / ಡಿ.ಡಿ. ಅನ್ನು 15 ದಿವಸಗಳೊಳಗಾಗಿ ಹಾಜರು ಪಡಿಸಿ ಭೂ ಪರಿವರ್ತನಾ ಮಂಜೂರಾತಿ ಆದೇಶ ಪಡೆಯತಕ್ಕದ್ದು.

ನಿಗದಿ ಪಡಿಸಿದ ಅವಧಿಯಲ್ಲಿ ಭೂ ಪರಿವರ್ತನೆ ಶುಲ್ಕ ಪಾವತಿಸಿದ ಬಗ್ಗೆ ಚಲನ್ / ಡಿ.ಡಿ. ಮತ್ತು ಕರಾರು ಪತ್ರವನ್ನು ಹಾಜರು ಪಡಿಸದಿದ್ದಲ್ಲಿ ನಿಮ್ಮ ಅರ್ಜಿಯನ್ನು ತಿರಸ್ಕರಿಸಲಾಗುವುದು.

| ಸರ್ವೆ ನಂ : | ವಿಸ್ತೀರ್ಣ ಎಕರೆ / ಗುಂಟೆ | ಹಣ ಪಾವತಿಯ ವಿವರ | | ಮೊಬಲಗು ರೂ. ಪೈ |
|---|---|---|---|---|
| 63/1 | 0-16 ಗುಂಟೆ | 1. | ವಾಸದ ಉದ್ದೇಶಕ್ಕೆ ಭೂ ಪರಿವರ್ತನಾ ಶುಲ್ಕ ಎಕರೆ ಒಂದಕ್ಕೆ ರೂ. 54,450-00 ರಂತೆ | 21,780-00 |
| | | 2. | ಖರಾಬು ಕಿಮ್ಮತ್ತು ಎಕರೆ ಒಂದಕ್ಕೆ ರೂ. 80.00 ಲಕ್ಷದಂತೆ 0-16 ಗುಂಟೆ ಬಿ. ಖರಾಬಿಗೆ | 32,00,000-00 |
| | | 3. | ಪೋಡಿ ಶುಲ್ಕ ರೂ. 55-00 ರಂತೆ | 55-00 |
| | ಒಟ್ಟು 0-16 ಗುಂಟೆ | ಒಟ್ಟು | | 32,21,835-00 |

[ರೂಪಾಯಿ ಅಕ್ಷರಗಳಲ್ಲಿ : ಮೂವತ್ತೆರಡು ಲಕ್ಷದ ಇಪ್ಪತ್ತೊಂದು ಸಾವಿರದ ಎಂಟು ನೂರ ಮೂವತ್ತೈದು ರೂಪಾಯಿಗಳು ಮಾತ್ರ]

ಶ್ರೀ ಎಂ. ಚಂದ್ರಪ್ಪರೆಡ್ಡಿ ಬಿನ್ ಲೇಟ್ ಮುನಿಶಾಮಪ್ಪ,
ತೂಬರಹಳ್ಳಿ, ವರ್ತೂರು ಹೋಬಳಿ,
ಬೆಂಗಳೂರು ಪೂರ್ವ ತಾಲ್ಲೂಕು,
ಬೆಂಗಳೂರು.

ವಿಶೇಷ ಜಿಲ್ಲಾಧಿಕಾರಿಗಳ ಪರವಾಗಿ,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ :

1. ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2. ತಹಸೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರುರವರಿಗೆ ಮಾಹಿತಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.